ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20** **ದಿನಾಂಕ: 13–11–2019**

# ಪತ್ರಿಕಾ ಆಮಂತ್ರಣ

1. **ಕನ್ನಡ ಪುಸ್ತಕ ಪ್ರಾಧಿಕಾರ ವತಿಯಿಂದ ಯುವ ಬರಹಗಾರರ ಚೊಚ್ಚಲ ಕೃತಿಗಳ ಲೋಕಾರ್ಪಣೆ–2018 ಹಾಗೂ ಶಾಲಾ ಕಾಲೇಜುಗಳಿಗೆ ಉಚಿತ ಪುಸ್ತಕ ವಿತರಣೆ**

**ಉದ್ಘಾಟನೆ:**

ಶ್ರೀ ಸಿ. ಟಿ. ರವಿ.
ಕನ್ನಡ ಮತ್ತು ಸಂಸ್ಕೃತಿ, ಪ್ರವಾಸೋದ್ಯಮ ಮತ್ತು ಸಕ್ಕರೆ ಸಚಿವರು

**ಕೃತಿಗಳ ಬಿಡುಗಡೆ:**

ಡಾ. ಎಚ್.ಎಸ್. ವೆಂಕಟೇಶಮೂರ್ತಿ,
ಖ್ಯಾತ ಸಾಹಿತಿಗಳು.

**ಉಚಿತ ಪುಸ್ತಕ ವಿತರಣೆ:**

ಶ್ರೀ ಎಸ್. ರಂಗಪ್ಪ,
ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ.

**ಮುಖ್ಯ ಅತಿಥಿ:**

ಶ್ರೀ ಚಿದಾನಂದ ಸಾಲಿ,
ಹೆಸರಾಂತ ಸಾಹಿತಿಗಳು

**ಅಧ್ಯಕ್ಷತೆ:**

ಡಾ. ಎಂ.ಎನ್. ನಂದೀಶ್ ಹಂಚೆ,
ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ

ದಿನಾಂಕ : 14-11-2019, ಗುರುವಾರ ಸಮಯ: ಬೆಳಿಗ್ಗೆ 10.30 ಗಂಟೆಗೆ

ಸ್ಥಳ: ನಯನ ರಂಗಮಂದಿರ, ಜೆ. ಸಿ. ರಸ್ತೆ, ಕನ್ನಡ ಭವನ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

## ಉಪ ಚುನಾವಣೆ – ನಿಯಂತ್ರಣ ಕೊಠಡಿ ಸ್ಥಾಪನೆ

ಬೆಂಗಳೂರು, ನವೆಂಬರ್ 13 (ಕರ್ನಾಟಕ ವಾರ್ತೆ)

ಡಿಸೆಂಬರ್ 5 ರಂದು ಮಹಾಲಕ್ಷೀ ಲೇಔಟ್ ವಿಧಾನಸಭಾ ಕ್ಷೇತ್ರ ಉಪ ಚುನಾವಣೆ ನಡೆಯುವ ಹಿನ್ನಲೆಯಲ್ಲಿ ಈ ಕಚೇರಿಯಲ್ಲಿ ಚುನಾವಣೆ ಮುಕ್ತಾಯವಾಗುವವರೆಗೂ ದಿನದ 24 ಗಂಟೆಗಳ ಕಾಲ ಕಾರ್ಯನಿರ್ವಹಿಸುವಂತೆ ಅಬಕಾರಿ ಇಲಾಖೆಯ ನಿಯಂತ್ರಣಾ ಕೊಠಡಿಯನ್ನು ತೆರೆದಿದೆ.

ಸಾರ್ವಜನಿಕರು ಸಂಭವನೀಯ ಅಬಕಾರಿ ಅಕ್ರಮಗಳ ಬಗ್ಗೆ ಮಾಹಿತಿ/ದೂರನ್ನು ಅಬಕಾರಿ ಉಪ ಆಯುಕ್ತರ ಕಚೇರಿ, ಬೆಂಗಳೂರು ನಗರ ಜಿಲ್ಲೆ, (ಉತ್ತರ) ನಂ 26/4ಬಿ, 3ನೇ ಮಹಡಿ, ಇಂಡಸ್ಟ್ರಿಯಲ್ ಸಬರ್ಬ್ ಸೋಪ್ ಫ್ಯಾಕ್ಟರಿ ಮೆಟ್ರೋ ಸ್ಟೇಷನ್ ಪಕ್ಕ, ವೆಸ್ಟ್ ಆಫ್ ಕಾರ್ಡ್ ರಸ್ತೆ, 2 ನೇ ಹಂತ, ರಾಜಾಜಿನಗರ, ಬೆಂಗಳೂರು ಇಲ್ಲಿ ಚುನಾವಣೆ ಮುಕ್ತಾಯವಾಗುವವರೆಗೂ ಸ್ಥಿರ ದೂರವಾಣಿ ಸಂಖ್ಯೆ: **080 2337 0003** ಗೆ ಸಲ್ಲಿಸಬಹುದಾಗಿದೆ. ಎಂದು ಅಬಕಾರಿ ಉಪ ಆಯುಕ್ತರ ಕಚೇರಿ, ಬೆಂಗಳೂರು ನಗರ ಜಿಲ್ಲೆ (ಉತ್ತರ) ಯವರ ಪ್ರಕಟಣೆ ತಿಳಿಸಿದೆ.

## ರಾಷ್ಟ್ರೀಯ ಐಕ್ಯತಾ ಸಪ್ತಾಹ

ಬೆಂಗಳೂರು, ನವೆಂಬರ್ 13 (ಕರ್ನಾಟಕ ವಾರ್ತೆ)

ಪ್ರತಿ ವರ್ಷದಂತೆ ಕೇಂದ್ರ ಸರ್ಕಾರದ ಸೂಚನೆಯನ್ವಯ ರಾಜ್ಯಾದಾದ್ಯಂತ ದಿನಾಂಕ: 19-11-2019 ರಿಂದ 25-11-2019 ರವರೆಗೆ "ರಾಷ್ಟ್ರೀಯ ಐಕ್ಯತಾ ಸಪ್ತಾಹ" ವನ್ನು ಆಚರಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ಅದರಂತೆ, ರಾಷ್ಟ್ರದ ಸ್ವಾತಂತ್ರ್ಯ ಹಾಗೂ ಐಕ್ಯತೆಯನ್ನು ಬಲಪಡಿಸಲು ದೇಶದಲ್ಲಿ ಹೆಚ್ಚುತ್ತಿರುವ ಹಿಂಸಾಚಾರ ಮತ್ತು ಕೋಮು ದ್ವೇಷವನ್ನು ತಡೆಗಟ್ಟುವುದಕ್ಕಾಗಿ ರಾಷ್ಟ್ರೀಯ ಐಕ್ಯತಾ ಸಪ್ತಾಹವನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂದು ಸೂಚಿಸಿದ್ದು, ಈ ಸಪ್ತಾಹವನ್ನು ಆಚರಿಸುವಾಗ ಸಾರ್ವಜನಿಕರನ್ನು ಮತ್ತು ಸ್ವಯಂಸೇವಾ ಸಂಸ್ಥೆಗಳನ್ನು ಭಾಗಿಗಳನ್ನಾಗಿ ಮಾಡಿಕೊಂಡಲ್ಲಿ ಈ ಕಾರ್ಯಕ್ರಮವು ಹೆಚ್ಚು ಯಶಸ್ವಿಯಾಗುತ್ತದೆ. ದಿನಾಂಕ: 19-11-2019 ರ ಮಂಗಳವಾರದಂದು, ರಾಷ್ಟ್ರೀಯ ಐಕ್ಯತಾ ಪ್ರಮಾಣ

ವಚನವನ್ನು ಎಲ್ಲಾ ಸರ್ಕಾರದ ಕಚೇರಿಗಳಲ್ಲಿ ಸ್ವೀಕರಿಸಬೇಕಾಗಿ ಸಿಬ್ಬಂದಿ ಮತ್ತು ಸುಧಾರಣೆ ಇಲಾಖೆ ಸೂಚನೆ ನೀಡಿದೆ.

## ಗ್ರಾಹಕ ಸಂವಾದ ಸಭೆ

**ಬೆಂಗಳೂರು, ನವೆಂಬರ್ 12 (ಕರ್ನಾಟಕ ವಾರ್ತೆ)**

ಬೆವಿಕಂ ವ್ಯಾಪ್ತಿಗೆ ಒಳಪಡುವ ಎಲ್ಲಾ ಉಪ ವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3:00 ರಿಂದ ಸಂಜೆ 5:30 ರವರಗೆ ಗ್ರಾಹಕ ಸಂವಾದ ಸಭೆಗಳನ್ನು ನಡೆಸಲಾಗುತ್ತಿದೆ. ಸದರಿ ಸಭೆಯಲ್ಲಿ ಗ್ರಾಹಕರು ಪಾಲ್ಗೊಂಡು ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ.

ಅದರನ್ವಯ, ಈ ತಿಂಗಳ ಗ್ರಾಹಕ ಸಂವಾದ ಸಭೆ ದಿನಾಂಕ 16.11.2019 ರಂದು ಬೆವಿಕಂನ ಎಲ್ಲಾ ಉಪವಿಭಾಗಗಳಲ್ಲಿ ನಡೆಯಲಿದ್ದು, ಗ್ರಾಹಕರು ಈ ಸಭೆಯ ಸದುಪಯೋಗ ಪಡೆಯಲು ಪ್ರಕಟಣೆ ತಿಳಿಸಿದೆ.

## Customer Interaction Meetings (CIM)

**Bengalulru, November 13 (Karnataka Information)**

**Customer Interaction Meetings (CIM) are being conducted at all Sub Divisions of BESCOM on third Saturday of every month from 3.00pm to 5.30pm. In the said meeting Customers are requested to get their electricity related issues attended and resolved having one to one interaction with concerned BESCOM official**

In this regard CIM for the month of November is scheduled on 16.11.2019. In this regard all the esteemed consumers are requested to participate and make use of the opportunity in redressal of complaints says official press release.

## ಅಪ್ರೆಂಟಿಸ್‌ಶಿಪ್ (ಶಿಶುಕ್ಷು) ತರಬೇತಿ

ಬೆಂಗಳೂರು, ನವೆಂಬರ್ 13 (ಕರ್ನಾಟಕ ವಾರ್ತೆ)

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ವತಿಯಿಂದ ಖಾಸಗಿ ಸಂಸ್ಥೆಗಳ ಸಹಭಾಗಿತ್ವದಲ್ಲಿ ಬೆಂಗಳೂರು ನಗರ ಹೊಸೂರು ರಸ್ತೆಯಲ್ಲಿರುವ ಮಾದರಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಇಲ್ಲಿ ದಿನಾಂಕ: 14-11-2019 ರಂದು (ಗುರುವಾರ) ಬೆಳಿಗ್ಗೆ 10.00 ಗಂಟೆಯಿಂದ 4.00 ಗಂಟೆವರೆಗೆ ಅಪ್ರೆಂಟಿಸ್‌ಶಿಪ್ (ಶಿಶಿಕ್ಷು) ಹಾಗೂ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ.

ಈ ಮೇಳಲ್ಲಿ ಹಲವಾರು ಖಾಸಗಿ ಸಂಸ್ಥೆಗಳು ಹಾಗೂ ಕೈಗಾರಿಕೆಗಳು ಪಾಲ್ಗೊಳ್ಳುತ್ತಿದ್ದು ಅಭ್ಯರ್ಥಿಗಳನ್ನು ತಮ್ಮಲ್ಲಿ ಲಭ್ಯವಿರುವ ಶಿಶಿಕ್ಷು ತರಬೇತಿಗೆ ಆಯ್ಕೆ ಮಾಡಲಿದ್ದಾರೆ. ಹೆಚ್ಚಿನ ಮಾಹಿತಿಗೆ 080-26562307 ಸಂಪರ್ಕಿಸಬಹುದಾಗಿದೆ.

ಆಸಕ್ತ ಅಭ್ಯರ್ಥಿಗಳು ತಮ್ಮ ಎಲ್ಲಾ ದಾಖಲಾತಿಗಳೊಂದಿಗೆ ಹಾಜರಾಗಬಹುದಾಗಿದೆ ಎಂದು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಪ್ರಕಟಣೆ ತಿಳಿಸಿದೆ.